40

# ಉಪತಹಶೀಲ್ದಾರವರ ನ್ಯಾಯಾಲಯ ನಾಡ ಕಛೇರಿ ಹೊಸಹಳ್ಳಿ

ಸಂ/ಕಂ/ಹ.ಬ./ನಾ.ಕ.ಹೊ/94/2015-16 ದಿನಾಂಕ:12-04-2016

| ಅರ್ಜಿದಾರರು | ತಕರಾರುದಾರರು |
|---|---|
| ವೆಂಕಟೇಶ ತಂದೆ ಲೇಟ್ ಬಸಪ್ಪ<br>ಕೆಂಚಮಲ್ಲನಹಳ್ಳಿ ಗ್ರಾಮ<br>ಕೂಡ್ಲಿಗಿ ತಾಲೂಕು | ಸಣ್ಣ ಕೊಲ್ಲಮ್ಮ ಗಂಡ ಬಸಪ್ಪ<br>ಕೆಂಚಮಲ್ಲನಹಳ್ಳಿ ಗ್ರಾಮ<br>ಕೂಡ್ಲಿಗಿ ತಾಲೂಕು |
| ಕೂಡ್ಲಿಗಿ ತಾಲೂಕು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 55ಸಿ. ವಿಸ್ತೀರ್ಣ 3-11. ಎಕ್ರೆ ಜಮೀನನ್ನು ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 55ಸಿ. ವಿಸ್ತೀರ್ಣ 3-11. ಎಕ್ರೆ ಜಮೀನನ್ನು ಸದರಿ ಗ್ರಾಮದ ವೆಂಕಟೇಶ ತಂದೆ ಲೇಟ್ ಬಸಪ್ಪ ಇವರು ದಿನಾಂಕ 28-06-2013 ರ ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಕೆಂಚಮಲ್ಲನಹಳ್ಳಿ ಇವರು ನಮೂನೆ-21 ರ ನೋಟಿಸನ್ನು ದಿನಾಂಕ: 13-11-2013 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಅರ್ಜಿದಾರನ ತಾಯಿಯಾದ ಸಣ್ಣ ಕೊಲ್ಲಮ್ಮ ಗಂಡ ಬಸಪ್ಪ ಮತ್ತು ಇವರ ಮಗ ಮಲ್ಲೇಶ ತಂದೆ ಬಸಪ್ಪ. ಇವರು ನಮೂನೆ-21ಕ್ಕೆ ಸಹಿ ಮಾಡಿಲ್ಲದ ಕಾರಣ ಈ ಪ್ರಕರಣದ ಎಂ.ಆರ್ ನಂ: 22/2013-14. ದಿನಾಂಕ: 13-12-2013 ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದೆಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸು ನೀಡಿ ದಿನಾಂಕ 19-01-2016 ರಿಂದ 12-04-2016 ರ ವರೆಗೆ ವಿಚಾರಣೆ ಮಾಡಲಾಯಿತು

ವಿಚಾರಣೆಯ ಸಮಯದಲ್ಲಿ ಅರ್ಜಿದಾರರು ಮತ್ತು ತಕರಾರುದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 55ಸಿ. ವಿಸ್ತೀರ್ಣ 3-11. ಎಕ್ರೆ ಜಮೀನು ನಮ್ಮ ತಾಯಿಯವರಾದ ಸಣ್ಣ ಕೊಲ್ಲಮ್ಮ ಗಂಡ ಬಸಪ್ಪ. ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇದ್ದು ಇವರು ತಮ್ಮ ಸ್ವ ಇಚ್ಚೇಯಿಂದ ದಿನಾಂಕ 28-06-2013 ರಂದು ಪಾಲು ವಿಭಾಗ ಪತ್ರವನ್ನು ಬರೆಯಿಸಿ ಕೊಟ್ಟಿರುತ್ತಾರೆ. ಸದರಿ ಪಾಲು ವಿಭಾಗದ ಪತ್ರ ಪ್ರಕಾರ ಸದರಿ ಜಮೀನು ನನ್ ಹಿಸ್ಯಾಕ್ಕೆ ಬಂದಿರುತ್ತದೆ. ಕಾರಣ ಸದರಿ ಪಾಲು ವಿಭಾಗ ಪತ್ರ ಪ್ರಕಾರ ನನ್ನ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಕೋರಿರುತ್ತಾರೆ.

ವಿಚಾರಣೆಯಲ್ಲಿ ತಕರಾರದಾರರು ಹಾಜರಾಗಿದ್ದು ಸದರಿ ವಿವಾದಿತ ಜಮೀನನ್ನು ನಾವುಗಳು ಬೇರೆ ಬೇರೆಯಾಗಿರುತ್ತೇವೆ. ಸದರಿ ಜಮೀನು ನನ್ನ ಹಿಸ್ಯಾಕ್ಕೆ ಬಂದಿರುತ್ತದೆ. ಕಾರಣ ಹಕ್ಕು ಬದಲಾವಣೆಯ ಅರ್ಜಿಯನ್ನು ರದ್ದು ಪಡಿಸಿ ಯಥಾಸ್ಥಿತಿಯಂತೆ ಪಹಣಿ ಮಾಡಬೇಕೆಂದು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರು ಮತ್ತು ತಕರಾರುದಾರರ ಹೇಳಿಕೆಗಳನ್ನು ಕೇಳಿ ಉಭಯರು ಸೇರಿ ಯಥಾಸ್ಥಿತಿಯಂತೆ ಮುಂದುವರೆಸಲು ಕೋರಿ ಅರ್ಜಿ ಸಲ್ಲಿಸಿರುವ ಕಾರಣ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

**-:ಆದೇಶ:-**

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಸ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಕೆಂಚಮಲ್ಲನಹಳ್ಳಿ ಗ್ರಾಮದ ಸನಂ 55ಸಿ. ವಿಸ್ತೀರ್ಣ 3-11. ಎಕ್ರೆ ಜಮೀನಿನ ಪಹಣಿಯನ್ನು ಯಥಾಸ್ಥಿತಿಯಂತೆ ಮುಂದುವರೆಸಲು ಕೋರಿರುವ ಕಾರಣ ಅರ್ಜಿದಾರರ ಅರ್ಜಿಯನ್ನು ತಿರಸ್ಕರಿಸಿ ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸುತ್ತಾ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ: 12-04-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಛೇರಿ ಹೊಸಹಳ್ಳಿ
ಹೊಸಹಳ್ಳಿ

ಇದರ ಪ್ರತಿಯನ್ನು:

1) ಅರ್ಜಿದಾರರಾದ ವೆಂಕಟೇಶ ತಂದೆ [illegible]ಬಸಪ್ಪ ಕೆಂಚಮಲ್ಲನಹಳ್ಳಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ತಕರಾರುದಾರರಾದ ಸಣ್ಣ ಕೊಲ್ಲಮ್ಮ ಗಂಡ ಬಸಪ್ಪ ಕೆಂಚಮಲ್ಲನಹಳ್ಳಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕೆ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.